Des. No- 4446/2023
04-12-2023.

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ, ಕೊಡಗು-ಮಡಿಕೇರಿ.

## ಅಧಿಸೂಚನೆ

**ದಿನಾಂಕಃ 04 ನೇ ಡಿಸೆಂಬರ್ 2023**

**ವಿಷಯಃ**-ನವಕಾನೂನು ಪದವೀಧರರಿಗೆ 2023-24 ನೇ ಸಾಲಿನ ಪ್ರೋತ್ಸಾಹಧನ ನೀಡುವ ಯೋಜನೆಯ ಫಲಾನುಭವಿಗಳನ್ನು ಜಿಲ್ಲಾ ಮಟ್ಟದ ಸಮಿತಿಯಲ್ಲಿ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖಃ-1.ಕರ್ನಾಟಕ ಸರ್ಕಾರದ ನಡವಳಿಯ ಸರ್ಕಾರದ ಆದೇಶ ಸಂಃ ಲಾ ಎಲ್ಎಡಿ/478/2023, ಬೆಂಗಳೂರು, ದಿಃ 01.12.2023.
2.ಈ ಕಛೇರಿ ಟಿಪ್ಪಣಿಯ ಮೇಲಿನ ಆದೇಶ ದಿಃ 04.12.2023.

*****

ಉಲ್ಲೇಖ-1 ರಂತೆ ನವಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಗೆ 2023-24 ನೇ ಸಾಲಿನಲ್ಲಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತ್ವರಿತವಾಗಿ ತಲುಪಿಸುವ ಉದ್ದೇಶದಿಂದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

ಆದ್ದರಿಂದ ಅರ್ಹರಿರುವ ನವಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹರಿರುವ ನವಕಾನೂನು ಪದವೀಧರರು ಈ ಅಧಿಸೂಚನೆಯಲ್ಲಿ ತಿಳಿಸಿರುವ ಷರತ್ತು ಹಾಗೂ ಸೂಚನೆಗಳನ್ವಯ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸ್ವಯಂ ದೃಢೀಕರಿಸಿದ ದಾಖಲೆ ಪ್ರತಿಗಳೊಂದಿಗೆ ಕೆಳಗೆ ತಿಳಿಸಿದ ಸಂಬಂಧಪಟ್ಟ ಹಿರಿಯ ನ್ಯಾಯಾಧೀಶರುಗಳ ಮುಖಾಂತರ ಸಲ್ಲಿಸತಕ್ಕದ್ದು.

ಅರ್ಜಿಯನ್ನು ಸಲ್ಲಿಸಲು ಪ್ರಾರಂಭದ ದಿನಾಂಕಃ **13.12.2023** ಹಾಗೂ ಕಡೆಯ ದಿನಾಂಕಃ

**12.01.2024** ಸಂಜೆ **5.00** ಗಂಟೆ.

ಅರ್ಜಿ ಸಲ್ಲಿಸಬೇಕಾದ ವಿಳಾಸ

1. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಕೊಡಗು-ಮಡಿಕೇರಿ.
2. 2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಕೊಡಗು-ಮಡಿಕೇರಿ. (ಕಾರ್ಯ ನಿರ್ವಹಣೆ-ವಿರಾಜಪೇಟೆ).

3. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸೋಮವಾರಪೇಟೆ .
4. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಪೊನ್ನಂಪೇಟೆ.
5. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಕುಶಾಲನಗರ.

**ಷರತ್ತುಗಳುಃ-**

1. ಈ ಯೋಜನೆಯು 2023-24 ನೇ ಸಾಲಿನಲ್ಲಿ ಅನುಷ್ಠಾನಗೊಳ್ಳುತ್ತಿದ್ದು, ಈ ಯೋಜನೆಯಡಿ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ವಕೀಲರ ಷರತ್ತಿನಡಿಯಲ್ಲಿ ದಿಃ 01.06.2022 ರಿಂದ 31.05.2023 ರವರೆಗಿನ ಅವಧಿಯಲ್ಲಿ ವಕೀಲ ವೃತ್ತಿಗೆ ನೊಂದಾಯಿಸಿದವರಿಗೆ ಮಾತ್ರ ಅನ್ವಯವಾಗುವುದು.

2. ಈ ಯೋಜನೆಯಡಿಯಲ್ಲಿ ಪ್ರೋತ್ಸಾಹಧನದ ಮೊತ್ತ ಪ್ರತಿ ಮಾಹೆಗೆ ರೂ.2,000/- (ಎರಡು ಸಾವಿರ ರೂಪಾಯಿಗಳು)ಒಟ್ಟು 24 ತಿಂಗಳುಗಳ ಅವಧಿಗೆ ಸೀಮಿತವಾಗಿರುವುದು.

3. ಸರ್ಕಾರಿ, ಅರೆ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿ ವಯೋನಿವೃತ್ತಿ ಕಡ್ಡಾಯ ನಿವೃತ್ತಿ ಮತ್ತು ಸ್ವಇಚ್ಛಾ ನಿವೃತ್ತಿ ಹೊಂದಿದ ನಂತರ ವಕೀಲ ವೃತ್ತಿ ನಡೆಸಲು ಇಚ್ಛಿಸುವ ಕಾನೂನು ಪದವೀಧರರು ಮತ್ತು ಅಂತಹ ಯಾವುದೇ ಸೇವೆಯಿಂದ ತೆಗೆದುಹಾಕಲ್ಪಟ್ಟ ಕಾನೂನು ಪದವೀಧರರು ಪ್ರೋತ್ಸಾಹಧನ ಪಡೆಯಲು, ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

4. ಈ ಯೋಜನೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯ/ಕುಟುಂಬದ ವಾರ್ಷಿಕ ವರಮಾನದ ಮಿತಿಯು ರೂ.40,000/- (ನಲವತ್ತು ಸಾವಿರ ರೂಪಾಯಿಗಳು) ನ್ನು ಮೀರತಕ್ಕದ್ದಲ್ಲ.

5. ಇಂತಹದೇ ಸೌಲಭ್ಯವನ್ನು ಈ ಯೋಜನೆ/ಇತರೆ ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಬೇರೆ ಯಾವುದೇ ಇಲಾಖೆಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳು ಈ ಯೋಜನೆಯ ಸೌಲಭ್ಯಗಳಿಗೆ ಅರ್ಹರಾಗುವುದಿಲ್ಲ.

6. ಹೊಸದಾಗಿ ವಕೀಲರ ವೃತ್ತಿಯಲ್ಲಿ ತೊಡಗುವ ಕಾನೂನು ಪದವೀಧರರು ರಾಜ್ಯ ಬಾರ್ ಕೌನ್ಸಿಲ್ ನಲ್ಲಿ ನೊಂದಾಯಿಸಿದ ನಂತರ ಸ್ಥಳೀಯ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣ ಪತ್ರ ಪಡೆದು ಸಂಬಂದಪಟ್ಟ ಸಮಿತಿಯ ಸಂಬಂಧಿತ ತಾಲ್ಲೂಕಿನ ಹಿರಿಯ ನ್ಯಾಯಾಧೀಶರುಗಳ ಮುಖಾಂತರ ಮತ್ತು ಜಿಲ್ಲಾ ಹಂತದಲ್ಲಿ ಅರ್ಹ ಕಾನೂನು ಪದವೀಧರರು ನೇರವಾಗಿ ಸಮಿತಿಯ ಅಧ್ಯಕ್ಷರಿಗೆ ವಿಳಾಸಿಸಿ ಅರ್ಜಿ ಸಲ್ಲಿಸತಕ್ಕದ್ದು.

**ಸೂಚನೆಗಳು:-**

1. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.
2. ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಅರ್ಜಿಯೊಂದಿಗೆ ಸಂಬಂಧಪಟ್ಟ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸಿ ಅರ್ಹ ಅಭ್ಯರ್ಥಿಗಳು ಮೇಲೆ ತಿಳಿಸಿದ ಆಯಾ ತಾಲ್ಲೂಕಿನ ಹಿರಿಯ ನ್ಯಾಯಾಧೀಶರ ಮುಖಾಂತರ ಅರ್ಜಿಯನ್ನು ಸಲ್ಲಿಸತಕ್ಕದ್ದು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3. ಎಸ್.ಎಸ್.ಎಲ್.ಸಿ ಅಂಕಪಟ್ಟಿ, ದ್ವಿತೀಯ ಪಿಯುಸಿ ಅಂಕಪಟ್ಟಿ, ಪದವಿ ಅಂಕಪಟ್ಟಿ, ಕಾನೂನು ಪದವಿಯ ಪ್ರಮಾಣ ಪತ್ರ, ರಾಜ್ಯ ಬಾರ್ ಕೌನ್ಸಿಲಿನ ನೊಂದಣಿ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಕೀಲ ವೃತ್ತಿ ನಿರ್ವಹಿಸುತ್ತಿರುವ ಬಗ್ಗೆ ಸಂಬಂಧಿಸಿದ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣ ಪತ್ರವನ್ನು ಪಡೆದು ಎಲ್ಲಾ ದಾಖಲೆಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.
4. ಇತ್ತೀಚಿನ ಭಾವಚಿತ್ರ ಮತ್ತು ಆಧಾರ್ ಕಾರ್ಡ್/ಚುನಾವಣಾ ಗುರುತಿನ ಚೀಟಿಯ ಜೆರಾಕ್ಸ್ ಪ್ರತಿಯನ್ನು ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.
5. ಅರ್ಹ ಅಭ್ಯರ್ಥಿಗಳಿಗೆ ಪ್ರೋತ್ಸಾಹಧನ ನೀಡುವ ಸಂಬಂಧ/ಆಯ್ಕೆಯ ಸಂಬಂಧ ಜಿಲ್ಲಾ ಹಂತದ ಸಮಿತಿಯಿಂದ ಮಾಡಲಾಗುವ ತೀರ್ಮಾನವೇ ಅಂತಿಮವಾಗಿರುತ್ತದೆ.

ತಮ್ಮ ವಿಶ್ವಾಸಿ,

ಸಹಿ/XXX

**(ಹೆಚ್.ಸಿ.ಶಾಮ್‌ಪ್ರಸಾದ್)**

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು

ಕೊಡಗು-ಮಡಿಕೇರಿ.

**ಪ್ರತಿಯನ್ನು:-**

ಕರ್ನಾಟಕ ಸರ್ಕಾರದ ಉಪ ಕಾರ್ಯದರ್ಶಿ, ಕಾನೂನು ಇಲಾಖೆ, (ಆಡಳಿತ-2), ವಿಧಾನ ಸೌಧ, ಬೆಂಗಳೂರು.